ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು - 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 05-04-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪುರಸ್ಕೃತರಿಗೆ ಅಭಿನಂದನಾ ಸಮಾರಂಭ:<br><br>ಮುಖ್ಯ ಅತಿಥಿಗಳು:<br><br>ಡಾ: ಜಯಮಾಲ,<br>ಹಿರಿಯ ಚಲನಚಿತ್ರ ಕಲಾವಿದರು, ಶಾಸಕರು<br><br>ತಾರಾ ಅನೂರಾಧ,<br>ಹಿರಿಯ ಚಲನಚಿತ್ರ ಕಲಾವಿದರು, ಶಾಸಕರು<br><br>ಎನ್.ಆರ್. ವಿಶುಕುಮಾರ್,<br>ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ<br><br>ಸಾ.ರಾ. ಗೋವಿಂದು,<br>ಅಧ್ಯಕ್ಷರು, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ<br><br>ಪದ್ಮಶ್ರೀ ಗಿರೀಶ್ ಕಾಸರವಳ್ಳಿ<br>ಹಿರಿಯ ಚಲನಚಿತ್ರ ನಿರ್ದೇಶಕರು,<br><br>ಟಿ.ಎಸ್. ನಾಗಾಭರಣ,<br>ಹಿರಿಯ ಚಲನಚಿತ್ರ ನಿರ್ದೇಶಕರು,<br><br>ಅಧ್ಯಕ್ಷತೆ:<br>ಎಸ್.ವಿ. ರಾಜೇಂದ್ರಸಿಂಗ್ ಬಾಬು,<br>ಅಧ್ಯಕ್ಷರು,<br>ಕರ್ನಾಟಕ ಚಲನಚಿತ್ರ ಅಕಾಡೆಮಿ | 6-4-2016<br>ಬುಧವಾರ<br>ಬೆಳಗ್ಗೆ<br>10-30 ಗಂಟೆಗೆ | ಚಾಮುಂಡೇಶ್ವರಿ ಸ್ಟುಡಿಯೋ,<br>ಮಿಲ್ಲರ್ಸ್ ರಸ್ತೆ,<br>ಬೆಂಗಳೂರು |

| 2 | ಪತ್ರಿಕಾಗೋಷ್ಠಿ:<br>ಯು. ಟಿ. ಖಾದರ್,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು | 6-4-2016<br>ಬುಧವಾರ<br>ಬೆಳಗ್ಗೆ<br>10-30 ಗಂಟೆಗೆ | ಕೊಠಡಿ ಸಂಖ್ಯೆ 318<br>ಮೂರನೇ ಮಹಡಿ,<br>ವಿಕಾಸ ಸೌಧ<br>ಬೆಂಗಳೂರು |
|---|---|---|---|

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಪರಿಶಿಷ್ಟರ ಶ್ರೇಯೋಭಿವೃದ್ಧಿಗೆ ಮೀಸಲಿರಿಸಿರುವ ಅನುದಾನ ದುರ್ಬಳಕೆಯಾಗಬಾರದು : ಮುಖ್ಯಮಂತ್ರಿ ಎಚ್ಚರಿಕೆ

ಬೆಂಗಳೂರು, ಏಪ್ರಿಲ್ 5 (ಕರ್ನಾಟಕ ಸರ್ಕಾರ) :

ಸರ್ಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಶ್ರೇಯೋಭಿವೃದ್ಧಿಗೆ ಮೀಸಲಿರಿಸಿರುವ ಅನುದಾನ ಯಾವುದೇ ಕಾರಣಕ್ಕೂ ದುರ್ಬಳಕೆ ಆಗಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಲ್ಲಿ ಇಂದು ಎಚ್ಚರಿಕೆ ನೀಡಿದರು.

ಹಸಿರು ಕ್ರಾಂತಿಯ ಹರಿಕಾರ ಹಾಗೂ ಮಾಜಿ ಉಪ ಪ್ರಧಾನಿ ದಿವಂಗತ ಡಾ ಬಾಬು ಜಗಜೀವನ ರಾಂ ಅವರ 109 ನೇ ಜನ್ಮ ದಿನಾಚರಣೆ ಹಾಗೂ ಜಗಜೀವನರಾಂ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು ರಾಜ್ಯ ಸರ್ಕಾರ ಈ ಸಮುದಾಯದ ಶ್ರೇಯೋಭಿವೃದ್ಧಿ ಬಯಸಿ ಇತರೆ ಎಲ್ಲಾ ಇಲಾಖೆಗಳಿಗಿಂತಲೂ ಹೆಚ್ಚು ಅನುದಾನವನ್ನು ಸಮಾಜ ಕಲ್ಯಾಣ ಇಲಾಖೆಗೆ ನೀಡಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಜನಸಂಖ್ಯೆಯ ಆಧಾರದ ಮೇರೆಗೆ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ತಮ್ಮ ಸರ್ಕಾರ 19,450 ಕೋಟಿ ರೂ. ಒದಗಿಸಿ ಇತಿಹಾಸ ಸೃಷ್ಟಿಸಿದೆ. ಇದರ ಜೊತೆಗೆ ಸಮಾಜ ಕಲ್ಯಾಣ ಇಲಾಖೆಯ ಇತರೆ ಕಾರ್ಯ ಚಟುವಟಿಕೆಗಳಿಗೆ 4,000 ಕೋಟಿ ರೂ. ಅನುದಾನ ಮೀಸಲಿರಿಸಲಾಗಿದೆ. ಈ ಎಲ್ಲಾ ಅನುದಾನವನ್ನು ಸಮಾಜ ಕಲ್ಯಾಣ ಇಲಾಖೆಯು ಆ ಜನಾಂಗದ ಅಭಿವೃದ್ಧಿಗೆ ಸದ್ವಿನಿಯೋಗ ಮಾಡುವ ಮೂಲಕ ಮುಂದಿನ 10 ವರ್ಷಗಳಲ್ಲಿ ಈ ಸಮುದಾಯದವರು ಸಾಮಾಜಿಕವಾಗಿ, ಆರ್ಥಿಕವಾಗಿ ಸಬಲತೆ ಹೊಂದಿ ಸಮಾಜದ ಮುಖ್ಯವಾಹಿನಿಗೆ ಬರುವಂತಾಗಬೇಕು ಎಂದು ತಿಳಿಸಿದರು.

ಬಾಬು ಜಗಜೀವನರಾಂ ಹೆಸರಿನಲ್ಲಿ ಮಾಗಡಿ ರಸ್ತೆಯ ಸುಮನಹಳ್ಳಿ ಹತ್ತಿರ 5 ಎಕರೆ ಪ್ರದೇಶದಲ್ಲಿ 50 ಕೋಟಿ ರೂ. ವೆಚ್ಚದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರ ಸ್ಥಾಪಿಸಲಾಗುವುದು. ಈ ಕಾಮಗಾರಿಯನ್ನು ಪ್ರಸ್ತುತ ವರ್ಷದಲ್ಲೇ ಕಾರ್ಯಾರಂಭ ಮಾಡಲಾಗುವುದು ಎಂದು ಹೇಳಿದ ಅವರು ನ್ಯಾಯಮೂರ್ತಿ ಎ. ಜೆ. ಸದಾಶಿವ ಆಯೋಗ ವರದಿ ಈಗಾಗಲೇ ಸಚಿವ ಸಂಪುಟದ ಮುಂದೆ ಬಂದಿದೆ. ಇತ್ತೀಚೆಗೆ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ವರದಿ ಕೂಡ ಸಿದ್ಧವಿದ್ದು, ಎರಡೂ ವರದಿಗಳನ್ನು ಮತ್ತೊಮ್ಮೆ ಸಚಿವ ಸಂಪುಟದ ಮುಂದೆ ಇಟ್ಟು ಪರಿಶೀಲನೆ ನಡೆಸಿ ನಂತರ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭಿವೃದ್ಧಿಗೆ ಸಮಾಜ ಕಲ್ಯಾಣ ಇಲಾಖೆ ಏನೇ ಯೋಜನೆ ರೂಪಿಸಿದರೂ ತಮ್ಮ ಸರ್ಕಾರ ಅದರ ಅನುಷ್ಠಾನಕ್ಕೆ ತಮ್ಮ ಸರ್ಕಾರ ಸದಾ ಸಿದ್ಧವಿದೆ ಎಂದ ಸಿದ್ದರಾಮಯ್ಯ ಅವರು ಬಾಬೂಜಿ ಅವರು ಈ ದೇಶ ಕಂಡ ಅತ್ಯಂತ ಶ್ರೇಷ್ಠ ಆಡಳಿತಗಾರರು ಹಾಗೂ ಜನಪ್ರಿಯ ನಾಯಕರೂ ಆಗಿದ್ದರು. ಎಲ್ಲಾ ಜಾತಿ ಜನಾಂಗದ ಪ್ರೀತಿ ಗಳಿಸಿದ್ದರು. ಕೇಂದ್ರ ಸರ್ಕಾರದ ಎಲ್ಲಾ ಪ್ರಮುಖ ಖಾತೆಗಳನ್ನು ಸಮರ್ಥವಾಗಿ ನಿರ್ವಹಿಸಿದ್ದ ಜಗಜೀವನರಾಮ್ ಅವರು ಈ ದೇಶದ ಪ್ರಧಾನಿ ಆಗುವ ಎಲ್ಲಾ ಅರ್ಹತೆಗಳನ್ನೂ ಹೊಂದಿದ್ದರು. ಆದರೆ ಈ ಸಮಾದಲ್ಲಿನ ವ್ಯವಸ್ಥೆಯಿಂದಾಗಿ ಪ್ರಧಾನಿ ಆಗುವ ಅವಕಾಶದಿಂದ ವಂಚಿತರಾದರು ಎಂದು ಹೇಳಿದರು.

ಯಾರು ಸಾಮಾಜಿಕವಾಗಿ ವ್ಯವಸ್ಥೆಯಿಂದ ಅಗೌರವಕ್ಕೆ ಒಳಗಾಗುತ್ತಾರೋ ಅವರಲ್ಲಿ ಸ್ವಾಭಿಮಾನದ ಕಿಚ್ಚು ಹೆಚ್ಚಿರುತ್ತದೆ. ಅಂತಹವರ ಸಾಲಿನಲ್ಲಿರುವ ಬಾಬಾ ಸಾಹೇಬ್ ಅಂಬೇಡ್ಕರ್ ಹಾಗೂ ಬಾಬು ಜಗಜೀವನರಾಮ್ ಅವರು ಸಾಮಾಜಿಕ ವ್ಯವಸ್ಥೆಯನ್ನು ಸುಧಾರಿಸಲು ಅಪಾರ ಕೊಡುಗೆ ಸಲ್ಲಿಸಿದರು ಎಂದರು.

ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ತಮ್ಮ ಪ್ರಾಸ್ತವಿಕ ಭಾಷಣದಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ವರ್ಗದವರಿಗೆ ನ್ಯಾಯ ಒದಗಿಸಲು ಬಾಬಾ ಸಾಹೇಬ್ ಅಂಬೇಡ್ಕರ್ ಹಾಗೂ ಬಾಬು ಜಗಜೀವನರಾಮ್ ಶ್ರಮವಹಿಸಿ ದುಡಿದರು. ಈ ಇಬ್ಬರೂ ಮಹಾನ್ ನಾಯಕರ ಆಶಯಗಳನ್ನು ಎಲ್ಲರೂ ಮೈಗೂಡಿಕೊಳ್ಳಬೇಕೆಂದರಲ್ಲದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಾಮಾಜಿಕ ನ್ಯಾಯ ದೊರಕಿಸಿಕೊಡುವಲ್ಲಿ ಹಗಲಿರಳು ಶ್ರಮಿಸುತ್ತಿದ್ದಾರೆ. ಸಮಾಜದಲ್ಲಿನ ಅಸಮತೋಲನವನ್ನು ಹೋಗಲಾಡಿಸಲು ಸತತವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎರಡನೇ ದೇವರಾಜ ಅರಸು ಎಂದು ಬಣ್ಣಿಸಿ, ಸಮಾಜ ಕಲ್ಯಾಣ ಇಲಾಖೆಯಿಂದ ಶೋಷಿತ ವರ್ಗಗಳಗೆ ದೊರೆಯುವ ಸೌಲಭ್ಯಗಳನ್ನು ವಿವರಿಸಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಸ್ವಾತಂತ್ರ್ಯ ಪೂರ್ವದ ಎಲ್ಲಾ ಹೋರಾಟಗಳಲ್ಲಿ ಅಸ್ಪೃಶ್ಯರನ್ನು ಒಟ್ಟುಗೂಡಿಸಿ ಸ್ವಾತಂತ್ರ್ಯ ಸಂಗ್ರಾಮದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದ ಡಾ ಬಾಬು ಜಗಜೀವನ್ ರಾಮ್ ಅವರು ಅಂತರ ಜಾತಿ ವಿವಾಹದಿಂದ ಮಾತ್ರ ಜಾತಿ ವ್ಯವಸ್ಥೆ ಹೋಗುತ್ತದೆ ಎಂದು ನಂಬಿದ್ದರು ಎಂದರು.

ಪ್ರತಿಷ್ಠಿತ ಜಗಜೀವನರಾಂ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಎಂ. ಜಯಣ್ಣ ಅವರು ದಲಿತ ಚಳುವಳಿ ಹುಟ್ಟು ಹಾಕಿದವರು ಪ್ರೊ ಬಿ. ಕೃಷ್ಣಪ್ಪ ಅವರು. ಸಮೃದ್ಧ ರಾಜ್ಯ ನಿರ್ಮಾಣ ಆಗಬೇಕೆಂದು ಬಯಸಿದ್ದ ಕೃಷ್ಣಪ್ಪ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡಬೇಕು ಎಂದು ಆಗ್ರಹಿಸಿದರು.

ಪ್ರಶಸ್ತಿ ಪುರಸ್ಕೃತ ಜಯಣ್ಣ ಅವರಿಗೆ ಮೈಸೂರು ಪೇಟ ತೊಡಸಿ ಐದು ಲಕ್ಷ ನಗದು ಒಳಗೊಂಡ ಜಗಜೀವನರಾಂ ಪ್ರಶಸ್ತಿಯನ್ನು ಸಿದ್ದರಾಮಯ್ಯ ಅವರು ಪ್ರದಾನ ಮಾಡಿ ಗೌರವಿಸಿದರು.

ಕಾರ್ಯಕ್ರಮಕ್ಕೂ ಮುನ್ನ ವಿಧಾನಸೌಧದ ಪಶ್ಚಿಮ ದ್ವಾರದ ಬಳಿ ಇರುವ ಡಾ ಬಾಬು ಜಗಜೀವನ ರಾಮ್ ಪ್ರತಿಮೆ ಮುಂದಿನ ಅವರ ಭಾವಚಿತ್ರಕ್ಕೆ ಮುಖ್ಯಮಂತ್ರಿ ಮತ್ತು ಇತರೆ ಗಣ್ಯರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಉನ್ನತ ಶಿಕ್ಷಣ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ, ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷ ಬಸಣ್ಣ ಕೆ. ಚಲವಾದಿ, ಬಾಬು ಜಗಜೀವನರಾಮ್ ಅಭಿವೃದ್ಧಿ ನಿಗಮದ ಅಧ್ಯಕ್ಷ ರಾಮಕೃಷ್ಣ, ದಲಿತ ಕವಿ ಡಾ ಸಿದ್ದಲಿಂಗಯ್ಯ, ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಗಂಗಾರಾಮ್ ಬಡೇರಿಯಾ ಅವರೂ ಸೇರಿದಂತೆ ಹಿರಿಯ ಅಧಿಕಾರಿಗಳು ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

*********

ಬಾಬು : ಕೆ ಪಿ ಪಿ : ಎಂ ಕೆ ಎಂ : ವಿ ಎಸ್

## ತೋಟಗಾರಿಕಾ ತರಬೇತಿಗೆ ಅರ್ಜಿ ಆಹ್ವಾನ

**ಬೆಂಗಳೂರು, ಏಪ್ರಿಲ್ 5 (ಕರ್ನಾಟಕ ವಾರ್ತೆ)**

2015-16 ನೇ ಸಾಲಿನಲ್ಲಿ ದಿನಾಂಕ 05-05-2016 ರಿಂದ 28-02-2017 ರವರೆಗೆ ತೋಟಗಾರಿಕೆ ತರಬೇತಿ ಕೇಂದ್ರ , ಲಾಲ್‌ಬಾಗ್, ಬೆಂಗಳೂರು ಇಲ್ಲಿ ನಡೆಯುವ 10 (ಹತ್ತು) ತಿಂಗಳ ಅವಧಿಯ ತೋಟಗಾರಿಕೆ

ತರಬೇತಿಗೆ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ತುಮಕೂರು, ರಾಮನಗರ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಲ್ಲಿನ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಆಯಾ ಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರು(ಜಿಪಂ) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು(ರಾವ) ಅಥವಾ ಇಲಾಖೆ ವೆಬ್‌ಸೈಟ್ **www.horticulture.kar.nic.in** ನಲ್ಲಿ ದಿ: 13-04-2016 ರಿಂದ 25-04-2016 ಪಡೆಯಬಹುದಾಗಿರುತ್ತದೆ.

ಅಭ್ಯರ್ಥಿಗಳನ್ನು ಸಂದರ್ಶನದ ಮುಖಾಂತರ ಆಯ್ಕೆ ಮಾಡಲಾಗುವುದು. ಸಂದರ್ಶನದ ದಿನಾಂಕ: 28-04-2016. ಭರ್ತಿ ಮಾಡಿದ ಅರ್ಜಿಗಳನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ದಿನಾಂಕ 25-04-2016 ಸಂಜೆ 5-30 ಗಂಟೆಯೊಳಗೆ ಆಯಾ ಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು.

ಬಾಬು/ಕೆಎಂ

## ರಾಷ್ಟ್ರ ಪ್ರಶಸ್ತಿ ಪುರಸ್ಕೃತರಿಗೆ ಅಭಿನಂದನಾ ಸಮಾರಂಭ

ಬೆಂಗಳೂರು, ಏಪ್ರಿಲ್ 5 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಏಪ್ರಿಲ್ 6 ರಂದು ಬೆಳಿಗ್ಗೆ 10-30 ಗಂಟೆಗೆ ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಇತ್ತೀಚಿನ ಚಲನಚಿತ್ರ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಿಗೆ ಅಭಿನಂದನಾ ಸಮಾರಂಭವನ್ನು ಹಮ್ಮಿಕೊಂಡಿದೆ.

ಡಾ. ರಾಜ್‌ಕುಮಾರ್ ಅವರ ಸಮಗ್ರ ಚರಿತ್ರೆ ಗ್ರಂಥಕ್ಕೆ "ಸ್ವರ್ಣಕಮಲ ಪ್ರಶಸ್ತಿ ಪಡೆದ ದೊಡ್ಡಹುಲ್ಲೂರು ರುಕ್ಕೋಜಿ, ಶ್ರೇಷ್ಠ ಪ್ರಾದೇಶಿಕ ಚಿತ್ರ ಪ್ರಶಸ್ತಿ ಪಡೆದ "ತಿಥಿ" ಚಿತ್ರದ ನಿರ್ದೇಶಕ ರಾಮ್ ರೆಡ್ಡಿ, ಪದ್ಮಶ್ರೀ ಗಿರೀಶ್ ಕಾಸರವಳ್ಳಿ ಕುರಿತ ವ್ಯಕ್ತಿ ಚಿತ್ರಕ್ಕಾಗಿ ರಜತಕಮಲ ಪ್ರಶಸ್ತಿ ಪಡೆದ ನಿರ್ದೇಶಕ ಒ.ಪಿ. ಶ್ರೀವಾಸ್ತವ, ಡ್ರಿಬ್ಲಿಂಗ್ ವಿತ್ ದೇರ್ ಫ್ಯೂಚರ್ ಚಿತ್ರಕ್ಕಾಗಿ ರಜತ ಕಮಲ ಪ್ರಶಸ್ತಿ ಪಡೆದ ನಿರ್ದೇಶಕ ಜಾಕೋಬ್ ವರ್ಗೀಸ್ ಮತ್ತು ನಿರ್ಮಾಪಕರಾದ ಎನ್. ದಿನೇಶ್ ರಾಜಕುಮಾರ್ ಮತ್ತು ಮ್ಯಾಥ್ಯೂ ವರ್ಗೀಸ್ ಅವರನ್ನು ಈ ಸಂದರ್ಭದಲ್ಲಿ ಅಭಿನಂದಿಸಲಾಗುವುದು.

ಸಮಾರಂಭದಲ್ಲಿ ಹಿರಿಯ ಚಲನಚಿತ್ರ ಕಲಾವಿದರು ಹಾಗೂ ಶಾಸಕರಾದ ಡಾ. ಜಯಮಾಲಾ, ಶ್ರೀಮತಿ ತಾರಾ ಅನೂರಾಧಾ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು, ಹಿರಿಯ ಚಲನಚಿತ್ರ ನಿರ್ದೇಶಕರಾದ ಪದ್ಮಶ್ರೀ ಗಿರೀಶ್ ಕಾಸರವಳ್ಳಿ ಹಾಗೂ ಟಿ.ಎಸ್. ನಾಗಭರಣ ಅವರು ಪಾಲ್ಗೊಳ್ಳುವರು. ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಎಸ್. ವಿ. ರಾಜೇಂದ್ರಸಿಂಗ್ ಬಾಬು ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸುವರು.

ಬಾಬು/ಕೆಎಂ